# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 194 | Pages. 2 | Date: 11-06-2025, WEDNESDAY | RNI NO: KARKAN/2024/89601

ಸಂಪುಟ : 01 - ಸಂಚಿಕೆ : 194 - ಪುಟಗಳು : 2 - 11 ಜೂನ್ 2025 ಬುಧವಾರ | Ph: 8762954248 | ದರ : ₹1


# ಜಿಲ್ಲೆಯಲ್ಲಿ ಕಾನೂನು ವ್ಯವಸ್ಥೆ ಹದಗೆಟ್ಟಿಲ್ಲ

## ಮಾಜಿ ಸಚಿವ ರೇವಣ್ಣಗೆ ಸಂಸದ ತಿರುಗೇಟು | ಆಧಾರ ರಹಿತ ಆರೋಪ ಮಾಡಬೇಡಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಸುಸ್ಥಿತಿಯಲ್ಲಿದ್ದು ಆಧಾರ ರಹಿತ ಆರೋಪ ಮಾಡುವುದನ್ನು ಬಿಡಬೇಕು ಎಂದು ಸಂಸದ ಶ್ರೇಯಸ್ ಪಟೇಲ್ ಮಾಜಿ ಸಚಿವ ಹೆಚ್.ಡಿ. ರೇವಣ್ಣಗೆ ತಿರುಗೇಟು ನೀಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಜಿಲ್ಲೆಯ ಯಾವುದೇ ಅಧಿಕಾರಿಗಳು ತಪ್ಪು ಮಾಡಿದ್ದರೆ ಸಂಬಂಧಪಟ್ಟ ಮೇಲಧಿಕಾರಿಗಳಿಗೆ ದೂರು ನೀಡಬೇಕು. ಅದನ್ನು ಬಿಟ್ಟು ಸುಳ್ಳು ಆರೋಪ ಮಾಡುವುದು ಬೇಡ ಎಂದು ಸಲಹೆ ನೀಡಿದರು.

ಎಲ್ಲ ಜನಪ್ರತಿನಿಧಿಗಳು ಸರ್ಕಾರದ ಅಂಗ, ಸರ್ಕಾರದ ಅಧಿಕಾರಿಗಳಿಂದ ಕೆಲಸ ತಗೋಬೇಕು. ಅದನ್ನು ಬಿಟ್ಟು ದಾಖಲೆ ಇಲ್ಲದೆ ಆರೋಪ ಮಾಡಬಾರದು. ನಾನು ಸಂಸದ, ಕಾಂಗ್ರೆಸ್ ಪಕ್ಷದ ಪ್ರತಿನಿಧಿಯಾಗಿ ಹೇಳುವುದಾದರೆ ಜಿಲ್ಲೆಯಲ್ಲಿ ಕಾನೂನು ವ್ಯವಸ್ಥೆ ಚೆನ್ನಾಗಿದೆ. ಆದರೆ ರೇವಣ್ಣ ಅವರು ಪೌತಿ ಅದಾಲತ್‌ನಲ್ಲಿ ಸರ್ಕಾರದ ಬಗ್ಗೆ ಲಘುವಾಗಿ ಮಾತನಾಡುವುದು ಖಂಡನೀಯ ಎಂದರು.

ಸರ್ಕಾರಿ ಕಾರ್ಯಕ್ರಮದಲ್ಲಿ ಸರ್ಕಾರದ ವಿರುದ್ಧ ಮಾತನಾಡಬಾರದು, ಅವರ ಮೇಲೆ ಗೌರವ ಇದೆ, ನನಗೆ ವಯಸ್ಸಾಗಿರುವಷ್ಟು ಅವರು ಶಾಸಕರಾಗಿ ಕೆಲಸ ಮಾಡಿದ್ದಾರೆ. ಇಂಥವರು ಯೋಚಿಸಿ ಮಾತನಾಡಬೇಕು, ಸುಮ್ಮನೆ ಆರೋಪ ಮಾಡಬಾರದು ಎಂದರು.

ನಮಗೂ ಜವಾಬ್ದಾರಿ ಇದೆ. ಜಿಲ್ಲೆಯ ಅಭಿವೃದ್ಧಿಗೆ ಬೇಕಾಗುವ ಅನುದಾನವನ್ನು ಸರ್ಕಾರದ ಕಡೆಯಿಂದ ತರುವ ಪ್ರಯತ್ನ ಮಾಡುತ್ತಿದ್ದೇವೆ. ಇದು ಮುಂದುವರಿಯಲಿದೆ ಎಂದು ಸಮರ್ಥಿಸಿಕೊಂಡರು.

ಜಿಲ್ಲೆಯಲ್ಲಿ ಕೊಲೆ ಇತ್ಯಾದಿ ಪ್ರಮಾಣ ಹಿಂದೆ ಹೋಲಿಸಿದರೆ ಈಗ ಕಡಿಮೆ ಆಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ ಅವರು ಜಿಲ್ಲೆಯನ್ನು ಕಡೆಗಣಿಸಿಲ್ಲ. ಜಿಲ್ಲೆಯ ಬಗ್ಗೆ ಸದಾ ಯೋಚಿಸುತ್ತಾರೆ. ಕಣ್ಣಿನ ಆಪರೇಷನ್ ಆಗಿರುವುದರಿಂದ ವಿಶ್ರಾಂತಿ ಪಡೆಯುತ್ತಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಮನೆಯಲ್ಲೇ ಇಸ್ಪೀಟ್ ದಂಧೆ ನಡೆಯುತ್ತಿದೆ ಎಂಬ ಸ್ಥಳೀಯ ಶಾಸಕ ಹೆಚ್.ಎಸ್. ಸ್ವರೂಪ್ ಅವರ ಆರೋಪಕ್ಕೆ ಪ್ರತಿಕ್ರಿಯಿಸಿ, ಯಾರೆಲ್ಲ ಗಾಂಜಾ ಮಾರಾಟ ಇತ್ಯಾದಿ ಅಕ್ರಮ ದಂಧೆಯಲ್ಲಿ ತೊಡಗಿರುವ ಕಿಂಗ್‌ಪಿನ್‌ನನ್ನು ಮೊದಲು ಪತ್ತೆ ಮಾಡುವ ಕೆಲಸ ಆಗಬೇಕು.

ಮನೆಯಲ್ಲಿ ಇಸ್ಪೀಟ್ ಆಡಿಸಿದರೆ ಅಂಥವರ ವಿರುದ್ಧ ಕ್ರಮ ಆಗಬೇಕು. ನಾವೆಲ್ಲ ಜನಪ್ರತಿನಿಧಿಗಳು, ಪರಸ್ಪರ ಆರೋಪ-ಪ್ರತ್ಯಾರೋಪ ಮಾಡುವ ಬದಲು ಅಭಿವೃದ್ಧಿಗೆ ಸಹಕಾರ ಕೊಡಿ, ಜನರಿಗೆ ತಪ್ಪು ಸಂದೇಶ ಹೋಗುವುದು ಬೇಡ ಎಂದರು.

ನಾನು ನನ್ನ ಶತ್ರುಗಳಿಗೂ ತೊಂದರೆ ಕೊಡಲ್ಲ, ರಾಜಕೀಯ ಇಂದು ಇರುತ್ತೆ, ನಾಳೆ ಹೋಗಲಿದೆ. ಚುನಾವಣೆ ಬಂದಾಗ ರಾಜಕೀಯ ಮಾಡೋಣ, ಯಾವುದೇ ಅಧಿಕಾರಿಗಳು ತಪ್ಪು ಮಾಡಿದ್ದರೆ ಅಕ್ರಮ ಆಗಬೇಕು. ಆದರೆ ಸುಳ್ಳು ಆರೋಪ ಬೇಡ ಎಂದರು. ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಜಿಲ್ಲಾ ಮಾಧ್ಯಮ ವಕ್ತಾರ ಹಾಗೂ ವಕೀಲ ದೇವರಾಜೇಗೌಡ, ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರ್, ಮುಖಂಡರಾದ ಖಯ್ಯುಂ, ಆರಿಫ್, ರಿಜ್ವಾನ್ ಇದ್ದರು.

## ಬಿಳಿ ಸುಳಿ ರೋಗ ಎಚ್ಚರ ವಹಿಸಿ

ಜಿಲ್ಲೆಯಲ್ಲಿ ಮೆಕ್ಕೆಜೋಳಕ್ಕೆ ಬಿಳಿ ಸುಳಿ ರೋಗ ತಗುಲಿರುವ ಬಗ್ಗೆ ಸಾರ್ವಜನಿಕರು, ರೈತರಿಗೆ ಅರಿವು ಮೂಡಿಸುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ಸಂಬಂಧ ಶೀಘ್ರ ಗೈಡ್‌ಲೈನ್ಸ್ ಬಿಡುಗಡೆ ಮಾಡಲಾಗುವುದು. ರಾಜ್ಯದ ಕೃಷಿ ಇಲಾಖೆ ಅಧಿಕಾರಿಗಳ ಜೊತೆ ಚರ್ಚಿಸಿ ಶೇ.50 ರಷ್ಟು ಔಷಧಿಯನ್ನು ಜಿಲ್ಲಾದ್ಯಂತ ವಿತರಣೆ ಮಾಡಲು ಸೂಚಿಸಲಾಗಿದೆ. ವರ್ಷಕ್ಕೊಂದು ಬೆಳೆ ಬೆಳೆಯುವ ಬಗ್ಗೆ ಮಾಹಿತಿ ಕೊಡಬೇಕು, ಫಸಲ್ ಭಿಮಾ ಯೋಜನೆಯಡಿ ನೋಂದಣಿ ಬಗ್ಗೆಯೂ ಅರಿವು ಮೂಡಿಸಬೇಕು ಎಂದರು.

ಸುಳಿ ರೋಗಕ್ಕೆ ಕಳಪೆ ಬಿತ್ತನೆ ಬೀಜ ಕಾರಣವೇ ಎಂಬ ಬಗ್ಗೆ ಜಿಕೆವಿಕೆಗೆ ಸ್ಯಾಂಪಲ್ ಕಳಿಸಿದ್ದು, ಎರಡು ದಿನಗಳಲ್ಲಿ ವರದಿ ಬರಲಿದೆ. ನಂತರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಸರ್ಕಾರಿ ಶಾಲಾ ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಕರಿಸಿ: ಚೇತನ್



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಸರ್ಕಾರಿ ಶಾಲಾ ಮಕ್ಕಳ ವಿದ್ಯಾಭ್ಯಾಸಕ್ಕೆ ಆರ್ಥಿಕ ಸ್ಥಿತಿವಂತರು ನೆರವಾಗುವ ಮೂಲಕ ಸದೃಢ ರಾಷ್ಟ್ರ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ದಲಿತ ಸಂಘಟನ ಸಮಿತಿ ಜಿಲ್ಲಾಧ್ಯಕ್ಷ ಚೇತನ್ ಶಾಂತಿಗ್ರಾಮ ಹೇಳಿದರು.

ತಾಲ್ಲೂಕಿನ ಮಗ್ಗೆ ಸರ್ಕಾರಿ ಶಾಲೆಯಲ್ಲಿ ದಲಿತ ಸಂಘಟನೆ, ಸಿರಿ ಸಮೃದ್ಧಿ ಚಾರಿಟೇಬಲ್ ಟ್ರಸ್ಟ್ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಹಾಗೂ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಕಲಿಕಾ ಸಾಮಗ್ರಿ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಳೆದ ತಿಂಗಳು ಇದೇ ಶಾಲೆಯಲ್ಲಿ ಏರ್ಪಡಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಕಲಿಕಾ ಸಾಮಗ್ರಿ ನೀಡುತ್ತೇವೆ ಎಂದು ಹೇಳಿದ್ದೆವು. ಅದರಂತೆ ನಮ್ಮ ಸಂಘಟನೆ ವತಿಯಿಂದ ನೋಟ್ ಪುಸ್ತಕ ಸೇರಿದಂತೆ ವಿವಿಧ ಕಲಿಕಾ ಸಾಮಾಗ್ರಿಗಳನ್ನು ವಿತರಣೆ ಮಾಡಿದ್ದೇವೆ. ಸರ್ಕಾರಿ ಶಾಲೆಗಳಲ್ಲಿ ಬಹುತೇಕ ಕೂಲಿ ಕಾರ್ಮಿಕರ ಮಕ್ಕಳು, ಬಡ ಕುಟುಂಬದ ಮಕ್ಕಳು ವ್ಯಾಸಂಗ ಮಾಡುತ್ತಿರುತ್ತಾರೆ. ಪೋಷಕರ ಆರ್ಥಿಕ ಸಮಸ್ಯೆಯಿಂದ ಮಕ್ಕಳ ವಿದ್ಯಾಭ್ಯಾಸ ಮೊಟಕುಗೊಳ್ಳುವ ಸಾಧ್ಯತೆ ಇರುತ್ತದೆ. ಆದ್ದರಿಂದ ಬಡಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಸರ್ಕಾರಿ ಶಾಲೆ ಮಕ್ಕಳಿಗೆ ಪ್ರತಿಯೊಬ್ಬರು ತಮ್ಮಲ್ಲಿ ಸಾಧ್ಯವಾದಷ್ಟು ಸಹಕಾರ ನೀಡುವ ಮನೋಭಾವವನ್ನು ರೂಢಿಸಿಕೊಳ್ಳಬೇಕಿದೆ ಎಂದು ತಿಳಿಸಿದರು.

ಇದೇ ವೇಳೆ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಶಾಲಾ ಆವರಣದಲ್ಲಿ ವಿವಿಧ ರೀತಿಯ ಗಿಡಗಳನ್ನು ನೆಟ್ಟು ವಿದ್ಯಾರ್ಥಿಗಳಿಗೆ ಪರಿಸರ ಜಾಗೃತಿ ಮೂಡಿಸಲಾಯಿತು.

## ಜೂ. 14 ರಂದು ಒಕ್ಕಲಿಗ ಬ್ರಿಗೇಡ್‌ನಿಂದ ಸಾಧಕರಿಗೆ ಸನ್ಮಾನ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹೊಯ್ಸಳ ನಾಡಿನ ಸಾಧಕರಿಗೆ ಅಭಿನಂದನೆ ಹಾಗೂ ಒಕ್ಕಲಿಗ ಸಮುದಾಯದ ಯುಪಿಎಸ್‌ಸಿ ಸಾಧಕರಿಗೆ ಸನ್ಮಾನ ಸಮಾರಂಭವನ್ನು ನಗರದ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಜೂ. 14ರ ಶನಿವಾರ ಸಂಜೆ 5 ಗಂಟೆಗೆ ಆಯೋಜಿಸಲಾಗಿದೆ ಎಂದು ಒಕ್ಕಲಿಗ ಯುವ ಬ್ರಿಗೇಡ್ ಸಂಸ್ಥಾಪಕ ಅಧ್ಯಕ್ಷ ನಂಜೇಗೌಡ ನಂಜುಂಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ದಿವ್ಯ ಸಾನ್ನಿಧ್ಯ ವಹಿಸುವರು. ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಉಪಸ್ಥಿತಿ ವಹಿಸುವರು. ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವಥ್ ನಾರಾಯಣ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಎಂ. ಶಿವಲಿಂಗೇಗೌಡ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ ಅಧ್ಯಕ್ಷ ಟಿ.ಜಿ. ಶಿವಶಂಕರೇಗೌಡ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಯುಪಿಎಸ್‌ಸಿ ಸಾಧಕರಾದ ಡಾ. ಆರ್. ಮಾಧವಿ, ನಿಖಿಲ್, ಎನ್. ನಮ್ರತಾ, ವಿಷ್ಣು ಬಿ.ಎಸ್. ಗೌಡ, ಮಧು, ಎಂ.ಎಸ್. ಉಲ್ಲಾಸ್, ಹೆಚ್.ಜಿ. ನಿಹಾಲ್ ಅವರನ್ನು ಸನ್ಮಾನಿಸಲಾಗುವುದು. ವಿಶೇಷ ಅತಿಥಿಗಳಾಗಿ ಐಎಎಸ್ ಅಧಿಕಾರಿ ಪಿ.ಎಸ್. ಗಿರೀಶ್, ಐಆರ್‌ಎಸ್ ವರುಣ್ ರಂಗಸ್ವಾಮಿ, ಐಎಫ್‌ಎಸ್ ಸಿ.ಕೆ. ಯೋಗೀಶ್ ಹಾಗು ಡಾ. ರಶ್ಮಿ ರಮೇಶ್ ದೊಡ್ಡಮನೆ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

## ಅಮಾನತು ಆದೇಶ ವಾಪಸ್ ಪಡೆಯಲು ಎಬಿವಿಪಿ ಆಗ್ರಹ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಆರ್‌ಸಿಬಿ ಸಂಭ್ರಮಾಚರಣೆ ವೇಳೆ ಸಂಭವಿಸಿದ ಅವಘಡದಲ್ಲಿ ಪೊಲೀಸ್ ಅಧಿಕಾರಿಗಳ ತಪ್ಪಿಲ್ಲದಿದ್ದರೂ ಅಮಾನತು ಮಾಡಿರುವ ರಾಜ್ಯ ಸರ್ಕಾರದ ನಡೆ ಖಂಡನೀಯ ಎಂದು ಆರೋಪಿಸಿ ಎಬಿವಿಪಿ ಕಾರ್ಯಕರ್ತರು ಮಂಗಳವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ರಾಜ್ಯ ಸರ್ಕಾರದ ಹಗೆತನದಿಂದ ಪ್ರಾಮಾಣಿಕ ಅಧಿಕಾರಿಗಳು ಕಪ್ಪು ಚುಕ್ಕೆ ಅನುಭವಿಸುವಂತಾಗಿದೆ.

ಅಮಾನತು ಆದೇಶವನ್ನು ಸರ್ಕಾರ ಕೂಡಲೇ ವಾಪಾಸ್ ಪಡೆಯಬೇಕು ಎಂದು ಆಗ್ರಹಿಸಿದರು. ಟ್ರೋಫಿ ಗೆದ್ದ ಸಂಭ್ರಮಾಚರಣೆ ವೇಳೆ ರಾಜ್ಯ ಸರ್ಕಾರದ ವಿವೇಚನಾ ರಹಿತ ತೀರ್ಮಾನದಿಂದ ಕಾಲ್ತುಳಿತ ಸಂಭವಿಸಿ 11 ಮಂದಿ ಜೀವ ಕಳೆದುಕೊಂಡಿದ್ದಾರೆ. 18 ವರ್ಷಗಳ ನಂತರ ಐಪಿಎಲ್ ಕಪ್ ಗೆದ್ದ ಆರ್‌ಸಿಬಿ ತಂಡಕ್ಕೆ ಸನ್ಮಾನ ಸಂಬಂಧ ವಿಧಾನಸೌಧ ಭದ್ರತಾ ವಿಭಾಗದ ಡಿಸಿಪಿ ಎಂ.ಎನ್ ಕರಿ ಬಸವನಗೌಡ ಅವರು ಎಚ್ಚರಿಕೆ ನೀಡಿದ್ದರು. ಆದರೂ ವಿಧಾನಸೌಧದ ಮೆಟ್ಟಿಲುಗಳ ಮೇಲೆ ಆತುರದಲ್ಲಿ ಸನ್ಮಾನ ಮಾಡಿದ್ದು, ವ್ಯವಸ್ಥಿತ ತಯಾರಿ ಇಲ್ಲದೆ ಕ್ರೀಡಾಂಗಣದಲ್ಲಿ ಸಂಭ್ರಮಾಚರಣೆ ಆಯೋಜನೆ ಮಾಡಿದ್ದು ದುರಂತಕ್ಕೆ ಕಾರಣ ಎಂದರು.

ಯುವ ಜನತೆ ಸಹಜವಾಗಿಯೇ ಉನ್ಮಾದದಲ್ಲಿದ್ದರು. ಆದರೆ ಪುಕ್ಕಟ್ಟೆ ಪ್ರಚಾರಪ್ರಿಯ ಕಾಂಗ್ರೆಸ್ ಸರ್ಕಾರದ ಎಡಬಿಡಂಗಿ ನಿಲುವಿನಿಂದ 11 ಯುವಕ-ಯುವತಿಯರು ಬಲಿಯಾದರು. ಮನೆ ಬೆಳಗಬೇಕಿದ್ದ ಕುಡಿ ಕಳೆದುಕೊಂಡ ಕುಟುಂಬಗಳ ಆಕ್ರಂದನ ರಾಜ್ಯದ ಇತಿಹಾಸದಲ್ಲಿ ಕರಾಳ ಅಧ್ಯಾಯವಾಗಿದೆ. ಕಾಲ್ತುಳಿತ ಪ್ರಕರಣದಲ್ಲಿ ಸರ್ಕಾರ, ಪೊಲೀಸ್ ಇಲಾಖೆ, ಕೆಎಸ್‌ಸಿಎ, ಆರ್‌ಸಿಬಿ ಮ್ಯಾನೇಜಮೆಂಟ್ ಹಾಗೂ ಜನರ ಅತಿರೇಕದ ನಡವಳಿಕೆ ಸೇರಿದಂತೆ ಹಲವಾರು ಹಂತಗಳಲ್ಲಿ ಲೋಪ ಆಗಿವೆ. ಇದು ಕಣ್ಣಿಗೆ ಕಾಣುವ ಸತ್ಯ. ಪ್ರಕರಣದ ತೀವ್ರತೆ ಅರಿತು ರಾಜ್ಯ ಸರ್ಕಾರ ಈಗಾಗಲೇ ನ್ಯಾಯಾಂಗ ತನಿಖೆಗೆ ಆದೇಶ ನೀಡಿದೆ. ಜೊತೆಗೆ ಸಿಐಡಿ ತನಿಖೆ ಸಹ ನಡೆಯುತ್ತಿದೆ. ಈ ನಡುವೆ ಪ್ರಾಮಾಣಿಕ ಪೊಲೀಸ್ ಅಧಿಕಾರಿಗಳ ತಲೆದಂಡ ಮಾಡಿರುವುದು ಅಕ್ಷಮ್ಯ ಎಂದು ಆಕ್ರೋಶ ಹೊರ ಹಾಕಿದರು.

ಮೃತರ ಕುಟುಂಬಗಳ ನೋವಿಗೆ ವಿದ್ಯಾರ್ಥಿ ಪರಿಷತ್ ಸಾಂತ್ವನ ತಿಳಿಸುತ್ತದೆ. ಗಾಯಗೊಂಡವರು ಆದಷ್ಟು ಬೇಗ ಚೇತರಿಸಿಕೊಂಡು ಬಿಡುಗಡೆಯಾಗಲಿ ಎಂದು ಆಶಿಸಿದರು.

ಈ ಸಂಭ್ರಮಾಚರಣೆ ಆತುರದ ಆಯೋಜನೆ, ವಿವೇಚನಾ ರಹಿತ ತೀರ್ಮಾನ, ಪೊಲೀಸ್ ಇಲಾಖೆಯ ಎಚ್ಚರಿಕೆಯ ಕಡೆಗಣನೆ, ಪುಕ್ಕಟೆ ಪ್ರಚಾರಪ್ರಿಯ ಕಾಂಗ್ರೆಸ್ ನಾಯಕರ ವರ್ತನೆ, ಯುವಜನರ ಉನ್ಮಾದ, ಸಾಮಾಜಿಕ ಜಾಲತಾಣಗಳಲ್ಲಿ ಅನಿಯಂತ್ರಿತ ಮಾಹಿತಿ ಸೇರಿದಂತೆ ಹಲವಾರು ಲೋಪಗಳಿಂದ ದುರ್ಘಟನೆ ಸಂಭವಿಸಿದೆ. ಈ ಸಂದರ್ಭದಲ್ಲಿ ಮುಂದಿನ ದಿನಗಳಲ್ಲಿ ಇಂತಹ ದುರ್ಘಟನೆ ನಡೆಯದಂತೆ ಸೂಕ್ತ ಕ್ರಮ ವಹಿಸಬೇಕೆಂದು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಗೆ ಒತ್ತಾಯಿಸಿದರು.

ಪ್ರಕರಣದ ಸೂಕ್ತ ತನಿಖೆ ನಡೆಸದೆ, ಪ್ರಾಮಾಣಿಕ ಪೊಲೀಸ್ ಅಧಿಕಾರಿಗಳ ಆತ್ಮಸ್ಥೈರ್ಯ ಕುಂದಿಸುವ ಮತ್ತು ಅವರ ಸಾಮರ್ಥ್ಯ ಪ್ರಶ್ನಿಸುವ ಅಮಾನತು ಆದೇಶ ಹಿಂಪಡೆಯಬೇಕು. ದುರ್ಘಟನೆಯ ನೈತಿಕ ಹೊಣೆಗಾರಿಕೆಯಿಂದ ನುಣಚಿಕೊಳ್ಳದಂತೆ ಸಿಎಂ, ಡಿಸಿಎಂ ಹಾಗೂ ಗೃಹಸಚಿವರ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಎಬಿವಿಪಿ ಮುಖಂಡರಾದ ಶ್ರೀನಿವಾಸ್ ಸಾವರ್ಕರ್, ಲೇಪಾಕ್ಷ ಮತ್ತಿತರರಿದ್ದರು.

## ದೊಡ್ಡಮಠದಲ್ಲಿ ಚನ್ನಬಸವೇಶ್ವರ ಕತೃ ಗದ್ದುಗೆ ಮಂಡಲ ಪೂಜೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಅರಕಲಗೂಡು: ಪಟ್ಟಣದ ದೊಡ್ಡಮಠದ ಆವರಣದಲ್ಲಿ ಸ್ಥಾಪಿಸಿರುವ ಶ್ರೀ ಚನ್ನಬಸವೇಶ್ವರ ಕತೃ ಗದ್ದುಗೆಯ ಮಂಡಲ ಪೂಜಾ ಸಮಾಪ್ತಿ ಸಮಾರಂಭ ಮಂಗಳವಾರ ಅರ್ಥಪೂರ್ಣವಾಗಿ ನೆರವೇರಿತು.

ಶ್ರೀಶೈಲ ಪೀಠದ ಜಗದ್ಗುರು ಡಾ. ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಅವರನ್ನು ಮಂಗಳವಾದ್ಯ, ವೀರಗಾಸೆ ಮೆರವಣಿಗೆ ಮೂಲಕ ಕರೆತರಲಾಯಿತು.

ಈ ವೇಳೆ ಮಾತನಾಡಿದ ಶ್ರೀಗಳು, ಮಾನವತ್ವದ ಸದ್ಗುಣಗಳನ್ನು ಮೈಗೂಡಿಸಿಕೊಂಡು ಮನಸ್ಸಿನಲ್ಲಿ ಆಧ್ಯಾತ್ಮಿಕತೆ ಬೆಳೆಸಿಕೊಳ್ಳುವುದು ಅತ್ಯವಶ್ಯಕ. ಮನುಷ್ಯ ಆಹಾರ ಆರೋಗ್ಯ ಆಧ್ಯಾತ್ಮಕ್ಕೆ ಒತ್ತು ಕೊಡಬೇಕು. ಮುಖ್ಯವಾಗಿ ಸೇವಿಸಿದ ಆಹಾರ ಆರೋಗ್ಯ ಎರಡೂ ಚೆನ್ನಾಗಿರಬೇಕಾದರೆ ಮನಸ್ಸಿನಲ್ಲಿ ಆಧ್ಯಾತ್ಮಿಕತೆ ಮೂಡಬೇಕು. ಹಾಗೆಯೇ ತಯಾರಿಸಿದವರ ಆಹಾರದ ಮೂಲದ ಬಗ್ಗೆಯೂ ಅರಿವು ಮೂಡಿಸಿಕೊಂಡು ಆಧ್ಯಾತ್ಮಿಕತೆಯ ಒಳ್ಳೆಯ ಮನಸ್ಸಿನಲ್ಲಿ ಸೇವಿಸಿದರೆ ಯಶಸ್ಸು ಏಳಿಗೆಯಾಗಲಿದೆ. ಅಂತರಂಗ ಶುದ್ಧಿಯಾದರೆ ಆರೋಗ್ಯವೂ ವೃದ್ಧಿಸಿ ದೇಹ ಮನಸ್ಸಿಗೂ ನೆಮ್ಮದಿ ಸಿಗಲಿದೆ. ಇವುಗಳನ್ನು ಮನಗಂಡಿದ್ದ ಸಿದ್ದಗಂಗಾ ಮಠದ ಶ್ರೀ ಶಿವಕುಮಾರ ಸ್ವಾಮೀಜಿ ಇದೇ ಮಾರ್ಗದಲ್ಲಿ ಸಾಗಿ ಆಧ್ಯಾತ್ಮದಲ್ಲಿ ಯಶಸ್ಸು ಸಾಧಿಸಿದರು. ಎಲ್ಲರೂ ಶಿವಶರಣರ ಆದರ್ಶಗಳನ್ನು ಅನುಸರಿಸಿ ಧರ್ಮ ಪರಿಪಾಲನೆ ಮೂಲಕ ಸನ್ಮಾರ್ಗದಲ್ಲಿ ಸಾಗಿದರೆ ಉನ್ನತಿ ಕಾಣಬಹುದು ಎಂದು ಪ್ರತಿಪಾದಿಸಿದರು.

ಜಯದೇವ ಹೃದ್ರೋಗ ತಜ್ಞೆ ಡಾ. ವಿಜಯಲಕ್ಷ್ಮಿ ಬಾಳೆಕಂದ್ರಿ ಮಾತನಾಡಿ, ಆರೋಗ್ಯದ ಕಡೆ ಗಮನ ಹರಿಸಬೇಕು. ಇತ್ತೀಚಿನ ದಿನಗಳಲ್ಲಿ ಗುಣಮಟ್ಟದ ಆಹಾರದ ಕೊರತೆ, ಒತ್ತಡದ ಜೀವನದಿಂದ ಯುವ ಪೀಳಿಗೆ ತನ್ನ ಅರ್ಧ ವಯಸ್ಸಿನಲ್ಲೇ ಮೃತರಾಗುತ್ತಿರುವುದು ಆತಂಕದ ವಿಷಯ. ಇಂತಹ ಸಂದರ್ಭದಲ್ಲಿ ಪ್ರತಿಯೊಬ್ಬ ಮನುಷ್ಯ ತನ್ನ ಜೀವನ ಶೈಲಿಯನ್ನ ಬದಲಾಯಿಸಿಕೊಳ್ಳುವುದು ಅನಿವಾರ್ಯವಾಗಿದೆ ಎಂದು ತಿಳಿಸಿದರು.

ದೊಡ್ಡ ಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಚಿಲುಮೆ ಮಠದ ಶ್ರೀ ಜಯದೇವ ಸ್ವಾಮೀಜಿ, ಶಿರದನಹಳ್ಳಿ ಮಠದ ಶ್ರೀ ಸದಾಶಿವ ಸ್ವಾಮೀಜಿ, ಮುಕ್ಕುಂದೂರು ಮಠದ ಶ್ರೀ ಮಹಾಂತ ಸ್ವಾಮೀಜಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಪರಮೇಶ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್. ರವಿಕುಮಾರ್, ಹೃದ್ರೋಗ ತಜ್ಞೆ ವಿಜಯಲಕ್ಷ್ಮಿ ಬಾಳೆಕಂದ್ರಿ, ಸಂತೆಮರೂರು ಗ್ರಾಮ ಪಂಚಾಯಿತಿ ಸದಸ್ಯ ಸಂತೋಷ್ ಶಣವಿನಕುಪ್ಪೆ, ಯೋಗೇಶ್, ಜಗದೀಶ್, ರುದ್ರಯ್ಯ ಇತರರಿದ್ದರು.

## ಡೆಂಗ್ಯು-ಕೋವಿಡ್ ಉಲ್ಬಣ: ಎಚ್ಚರ ವಹಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಡೆಂಗ್ಯು ಹಾಗೂ ಕೋವಿಡ್ ಹರಡದಂತೆ ಮುಂಜಾಗ್ರತೆ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಹೆಚ್.ಎಸ್. ಸ್ವರೂಪ್ ಸೂಚಿಸಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ 2025-26ನೇ ಸಾಲಿನ ವಿಪತ್ತು ನಿರ್ವಹಣಾ ಸಭೆ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ವತಿಯಿಂದ ಆಯೋಜಿಸಿದ್ದ ತಾಲ್ಲೂಕು ಮಟ್ಟದ ಅಂತರ್ ಇಲಾಖಾ ಅಧಿಕಾರಿಗಳಿಗೆ ವಿವಿಧ ಇಲಾಖಾವಾರು ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಾಗಾರದಲ್ಲಿ ಮಾತನಾಡಿ, ಮಳೆಗಾಲ ಸಂದರ್ಭದಲ್ಲಿ ರೋಗ ರುಜಿನಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಡೆಂಗ್ಯು ಕಾಯಿಲೆ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು. ಮನೆ ಮನೆ ಭೇಟಿ, ಲಾರ್ವಾ ಸಮೀಕ್ಷೆ ಹಾಗು ಶೀತ, ಕೆಮ್ಮು, ನೆಗಡಿಯಂತಹ ಸಾಮಾನ್ಯ ಲಕ್ಷಣಗಳಿರುವವರ ಮೇಲೆ ನಿಗಾ ವಹಿಸಬೇಕು. ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು ಮಳೆಯಿಂದ ಹಾನಿಯಾಗಿರುವ ಶಾಲಾ ಕಾಲೇಜು ಕಟ್ಟಡ ಹಾಗು ಬೆಳೆ ಹಾನಿ ಬಗ್ಗೆ ಮಾಹಿತಿ ನೀಡಿದರೆ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಅನುದಾನ ಕೊಡಿಸಲಾಗುವುದು. ಈಗಾಗಲೇ ಕೃಷಿ ಚಟುವಟಿಕೆಗಳು ಆರಂಭವಾಗಿದ್ದು ರೈತರಿಗೆ ಅಗತ್ಯವಿರುವ ಬಿತ್ತನೆ ಬೀಜ ಹಾಗು ಇನ್ನಿತರ ಸಲಕರಣೆಗಳನ್ನು ಒದಗಿಸಬೇಕು. ತಾಲ್ಲೂಕಿನಲ್ಲಿ ಮುಸುಕಿನ ಜೋಳ ಹಾನಿಯಾಗಿರುವ ಬಗ್ಗೆ ಮಾಹಿತಿ ನೀಡಿ ಸೂಕ್ತ ಪರಿಹಾರ ಕಲ್ಪಿಸಬೇಕು. ಮುಸುಕಿನ ಜೋಳಕ್ಕೆ ತಗಲುತ್ತಿರುವ ಬಿಳಿ ಸುಳಿ ರೋಗದ ಬಗ್ಗೆ ಕೃಷಿ ಅಧಿಕಾರಿಗಳ ಎಚ್ಚರಿಕೆ ವಹಿಸಬೇಕು ಎಂದರು. ರಾಜ್ಯದಲ್ಲಿ ಕೋವಿಡ್ ಪ್ರಕರಣ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಹಾಸನದಲ್ಲಿ ಸೋಂಕು ಹರಡುದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು. ಸೋಂಕು ದೃಢಪಡಿಸಲು ಪರೀಕ್ಷೆಯನ್ನು ಹೆಚ್ಚಿಸಬೇಕು ಎಂದು ಸೂಚಿಸಿದರು.

ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಗಿರೀಶ್, ಜಿಲ್ಲಾಧಿಕಾರಿ ಕಚೇರಿ ತಹಶೀಲ್ದಾರ್ ಮೋಹನ್, ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎನ್. ಮಂಜುಳಾ ಮತ್ತಿತರರಿದ್ದರು.

## ಜೂ. 14ಕ್ಕೆ ಪುಷ್ಪಗಿರಿ ಮಠದಲ್ಲಿ ಧಾರ್ಮಿಕ ಕಾರ್ಯಕ್ರಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ತಾಲ್ಲೂಕಿನ ಪುಷ್ಪಗಿರಿ ಮಹಾಸಂಸ್ಥಾನ ಮಠದಲ್ಲಿ ಜೂ. 14ರ ಶನಿವಾರ ಮಠದ ಜಗದ್ಗುರು ಲಿಂ. ಶ್ರೀ ಬಸವರಾಜೇಂದ್ರ ಸ್ವಾಮೀಜಿ ಅವರ 21ನೇ ಪುಣ್ಯ ಸಂಸ್ಮರಣೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ಮುಖ್ಯಸ್ಥೆ ವಿನುತ ಧನಂಜಯ ಹೇಳಿದರು.

ಪುಷ್ಪಗಿರಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಆಹ್ವಾನ ಪತ್ರಿಕೆ ವಿತರಿಸಿ ಮಾತನಾಡಿ, ಅಂದು ಬೆಳಿಗ್ಗೆ 10 ಗಂಟೆಗೆ ಧಾರ್ಮಿಕ ಕೈಂಕರ್ಯ ಆರಂಭವಾಗಲಿದೆ. ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಅವರ ಶ್ರಮ ಮತ್ತು ಸೇವೆಯಿಂದ ಪುಷ್ಪಗಿರಿ ಇಂದು ನಾಡಿನ ಗಮನ ಸೆಳೆದಿದೆ. ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ಪರಿಸರ ಸೇರಿ ಹತ್ತಾರು ಕ್ಷೇತ್ರಗಳಲ್ಲಿ ಅದ್ವಿತೀಯ ಸಾಧನೆ ಮಾಡಿದೆ. ಮಹಿಳಾ ಸಬಲೀಕರಣ ಹಿನ್ನೆಲೆಯಲ್ಲಿ ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆಯನ್ನು ಆರಂಭಿಸಿದ ಹೆಗ್ಗಳಿಕೆ ಪೂಜ್ಯರಿಗೆ ಸಲ್ಲುತ್ತದೆ ಎಂದರು.

ಪುಷ್ಪಗಿರಿ ಮಠದ ಲಿಂ. ಶ್ರೀ ಬಸವರಾಜೇಂದ್ರ ಸ್ವಾಮೀಜಿ ಅವರು ಶ್ರೀಮಠದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ. ಪ್ರತಿವರ್ಷದಂತೆ ಈ ಬಾರಿಯೂ ಸಂಸ್ಮರಣೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಉಪಾಧ್ಯಕ್ಷೆ ಅರೇಹಳ್ಳಿ ಗೀತಾ ಶಿವರಾಜ್ ಮಾತನಾಡಿ, ಪುಷ್ಪಗಿರಿ ಕ್ಷೇತ್ರವನ್ನು ಸರ್ವ ರೀತಿಯಲ್ಲೂ ಅಭಿವೃದ್ಧಿಪಡಿಸಲಾಗಿದೆ. ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ರಾಜ್ಯದ ನಾನಾ ಜಿಲ್ಲೆಯಲ್ಲಿ ಸಾವಿರಾರು ಮಹಿಳಾ ಸ್ವಸಹಾಯ ಸಂಘ ಸ್ಥಾಪಿಸಿ, ಮಹಿಳೆಯರಿಗೆ ಕೌಶಲ ತರಬೇತಿ, ಕಾರ್ಯಾಗಾರ, ಮಹಿಳಾ ಸಮಾವೇಶ ಹೀಗೆ ನಾನಾ ಪ್ರಕಾರದಲ್ಲಿ ಕೆಲಸ ಮಾಡುತ್ತಾ ಬಂದಿದೆ ಎಂದರು.

ಲಕ್ಕುಂದ ಗ್ರಾಮ ಪಂಚಾಯಿತಿ ಅಧ್ಯಕ್ಷ ಡಿ.ಪಿ. ಮಲ್ಲೇಶ್, ನಿವೃತ್ತ ಸೈನಿಕ ಶಿವರಾಜ್, ಮಲ್ಲಿಕಾ, ರೋಹಿಣಿ, ಮಂಜುಳಾ, ರತ್ನ, ಶೋಭಾ, ಪಾರ್ವತಿ, ಸವಿತಾ, ಯಶೋಧ, ಲೀಲಾ, ಸೌಭಾಗ್ಯ, ಗಾಯತ್ರಿ, ಜ್ಯೋತಿ ಮೋಹನ್ ಮತ್ತಿತರರಿದ್ದರು.

## 11 ಗ್ರಾಂ ತೂಕದ ಮಾಂಗಲ್ಯ ಸರ ಕಳವು

ಅರಸೀಕೆರೆ: ದಾರಿ ಕೇಳುವ ನೆಪದಲ್ಲಿ ಬೈಕ್ ತಡೆದ ಅಪರಿಚಿತನೊಬ್ಬ ಮಹಿಳೆ ಕೊರಳಿಂದ 11 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ ಕಿತ್ತುಕೊಂಡು ಪರಾರಿಯಾಗಿರುವ ಘಟನೆ ತಾಲ್ಲೂಕಿನ ಹುಂಡಿಗನಾಳು ಸಮೀಪ ನಡೆದಿದೆ. ಹಳೇಬೀಡು ಹೋಬಳಿ ಕನಕೇನಹಳ್ಳಿ ಗ್ರಾಮದ ರಾಜಮ್ಮ ಅವರು ಪತಿ ಸಿದ್ದೇಗೌಡ ಅವರೊಂದಿಗೆ ಬೈಕ್‌ನಲ್ಲಿ ಜೇನುಕಲ್ಲು ಸಿದ್ದೇಶ್ವರ ಸ್ವಾಮಿ ದೇವಸ್ಥಾನಕ್ಕೆ ಹೋಗುತ್ತಿದ್ದಾಗ ಎದುರುಗಡೆಯಿಂದ ಬಂದ ಅಪರಿಚಿತ ಯುವಕ ಬೈಕ್ ನಿಲ್ಲಿಸಿ ಅಪ್ಪಿಹಳ್ಳಿಗೆ ತಲುಪುವ ದಾರಿ ಯಾವುದು ಎಂದು ಕೇಳಿದ್ದಾನೆ. ಸಿದ್ದೇಗೌಡ ಅವರು ರಸ್ತೆ ತೋರಿಸುತ್ತಿದ್ದಾಗ ಹಿಂಬದಿ ಕುಳಿತಿದ್ದ ರಾಜಮ್ಮ ಅವರ ಕೊರಳಿಗೆ ಕೈ ಹಾಕಿ ಮಾಂಗಲ್ಯ ಸರ ಕಿತ್ತುಕೊಂಡು ಪರಾರಿಯಾಗಿದ್ದಾನೆ. ಜಾವಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಗ್ಯಾರಂಟಿ ಯೋಜನೆ ಅರ್ಹರಿಗೆ ತಲುಪಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ತಾಲ್ಲೂಕಿನಲ್ಲಿ 235 ನಿರುದ್ಯೋಗಿ ಪದವೀಧರರಿಗೆ ಯುವ ನಿಧಿ ಯೋಜನೆಯಡಿ ಮಾರ್ಚ್‌ನಲ್ಲಿ 7 ಲಕ್ಷ ರೂಪಾಯಿ ಡಿಬಿಟಿ ಮುಖಾಂತರ ಹಣ ಸಂದಾಯವಾಗಿದೆ ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಪೃಥ್ವಿ ಜಯರಾಮ್ ತಿಳಿಸಿದರು.



ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಹೆಚ್.ಎಂ. ರೇವಣ್ಣ ಅವರ ಮಾರ್ಗದರ್ಶನದಲ್ಲಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಪಂಚ ಗ್ಯಾರಂಟಿ ಯೋಜನೆಗಳನ್ನು ಶೇ. 98 ಫಲಾನುಭವಿಗಳಿಗೆ ತಲುಪಿಸಲು ಯಶಸ್ವಿಯಾಗಿದೆ.

ಫಲಾನುಭವಿಗಳು ಈಗ ಮೂರು ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡಿಕೊಳ್ಳಬೇಕು. ಗೃಹಲಕ್ಷ್ಮಿ ಯೋಜನೆಯಡಿ ಮಾರ್ಚ್ ತಿಂಗಳಲ್ಲಿ 21,565 ಫಲಾನುಭವಿಗಳಿಗೆ 4,31,30,000 ಹಣ ಜಮೆಯಾಗಿದೆ. ಅನ್ನಭಾಗ್ಯ ಯೋಜನೆಯಡಿ ತಾಲ್ಲೂಕಿನ 22,484 ಅರ್ಹ ಪಡಿತರ ಚೀಟಿ ಕುಟುಂಬಕ್ಕೆ ಡಿಸೆಂಬರ್ ತಿಂಗಳಲ್ಲಿ ಒಟ್ಟು 1,16,04,710 ರೂ. ಡಿಬಿಟಿ ಮುಖಾಂತರ ಸಂದಾಯವಾಗಿದೆ. ಶಕ್ತಿ ಯೋಜನೆಯಡಿ ಆಧಾರ್ ಕಾರ್ಡ್‌ಗಳನ್ನು ಪರಿಶೀಲಿಸಿ ಯೋಜನೆ ದುರುಪಯೋಗವಾಗದಂತೆ ನಿರ್ವಾಹಕರು ಕಾರ್ಯನಿರ್ವಹಿಸಬೇಕು.

ಗೃಹಜ್ಯೋತಿ ಯೋಜನೆ ಅಡಿ 200 ಯೂನಿಟ್ ವರೆಗೂ ಉಚಿತ ವಿದ್ಯುತ್ ನೀಡುತ್ತಿದ್ದು ಒಟ್ಟು 23,295 ಅರ್ಹ ಫಲಾನುಭವಿಗಳು ಯೋಜನೆ ಲಾಭ ಪಡೆಯುತಿದ್ದಾರೆ. ಶೇ. 100 ರಷ್ಟು ಫಲಾನುಭವಿಗಳಿಗೆ ಯೋಜನೆಯ ಲಾಭವನ್ನು ತಲುಪಿಸುವ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಬೇಕೆಂದು ಹೇಳಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸುಬ್ರಹ್ಮಣ್ಯ ಶರ್ಮ ಮಾತನಾಡಿ, ಮುಂದಿನ ದಿನಗಳಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಶಿಬಿರ ಏರ್ಪಡಿಸಲಾಗುವುದು ಎಂದರು.

ಸಭೆಯಲ್ಲಿ ತಾಲ್ಲೂಕು ಮಕ್ಕಳ ಮತ್ತು ಮಹಿಳಾ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಎ.ಟಿ. ಮಲ್ಲೇಶ್, ಸೆಸ್ಕಾಂ ವಿದ್ಯುತ್ ಸಹಾಯಕ ಇಂಜಿನಿಯರ್ ಎನ್. ಡಿ. ಕುಮಾರ್, ಆಹಾರ ನಿರೀಕ್ಷಕ ಮೋಹನ್ ಕುಮಾರ್, ಕೆಎಸ್‌ಆರ್‌ಟಿಸಿ ಸಂಚಾರ ನಿಯಂತ್ರಕರು, ಉದ್ಯೋಗ ವಿನಿಮಯ ಕಚೇರಿ ಅಧಿಕಾರಿಗಳು, ಎಲ್ಲ ಇಲಾಖಾ ಅಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನಾ ಸಮಿತಿಯ ಸದಸ್ಯರಾದ ಯೋಗೇಶ, ಶ್ರೀಧರ, ರುದ್ರಕುಮಾರ, ಶಿವಪ್ಪ, ಶಿವೇಗೌಡ, ಭುವನೇಶ್, ದರ್ಶನ್ ಇದ್ದರು.

# ಗ್ರಾಮ ಲೆಕ್ಕಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಕಂದಾಯ ಇಲಾಖೆಯನ್ನು ಸಂಪೂರ್ಣವಾಗಿ ಡಿಜಿಟಲೀಕರಣ ಮಾಡುವ ಉದ್ದೇಶದಿಂದ ಲ್ಯಾಪ್‌ಟಾಪ್ ನೀಡಲಾಗುತ್ತಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕು ಕಚೇರಿಯಲ್ಲಿ ಸೋಮವಾರ ಗ್ರಾಮ ಲೆಕ್ಕಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಿಸಿ ಮಾತನಾಡಿದ ಅವರು, ಕಂದಾಯ ಇಲಾಖೆಯ ಆಸ್ತಿ, ಭೂದಾಖಲೆಗಳ ನಿರ್ವಹಣೆಗೆ ಸಂಬಂಧಿಸಿ ಸಾರ್ವಜನಿಕ ಸೇವೆಗಳನ್ನು ಪಾರದರ್ಶಕವಾಗಿ ವಿತರಿಸಲು ಇದರಿಂದ ಅನುಕೂಲವಾಗುತ್ತದೆ. ಜತೆಗೆ ಎಲ್ಲಾ ಕಡತಗಳ ವಿಲೇವಾರಿ ಆನ್‌ಲೈನ್ ಮೂಲಕ ಆಗಬೇಕು. ಕೆಲಸ ವಿಳಂಬವಾಗಬಾರದು ಮತ್ತು ದಾಖಲೆಗಳನ್ನು ಕಳೆದುಹೋಗದಂತೆ ನೋಡಿಕೊಳ್ಳುವ ಉದ್ದೇಶದಿಂದ ಡಿಜಿಟಲೀಕರಣ ಮಾಡಲಾಗುತ್ತಿದೆ. ರೈತರಿಗೆ ಉತ್ತಮ ಸೇವೆ ನೀಡುವುದು ಇದರ ಮುಖ್ಯ ಉದ್ದೇಶ ಎಂದು ಹೇಳಿದರು.

ಡಿಜಿಟಲೀಕರಣದಿಂದ ದಾಖಲೆಗಳ ಅವಶ್ಯಕತೆ ಇದ್ದಾಗ ಸುಲಭವಾಗಿ ಪಡೆಯಬಹುದು. ರೈತರು ವಿನಾಕಾರಣ ಕಚೇರಿಗೆ ಅಲೆಯುವುದು ತಪ್ಪುತ್ತದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಕಂಪ್ಯೂಟರ್ ಮತ್ತು ಸ್ಕ್ಯಾನರ್ ಒದಗಿಸುವುದರ ಜತೆಗೆ ನುರಿತ ಸಿಬ್ಬಂದಿಯನ್ನು ನೇಮಿಸಲಾಗಿದೆ ಎಂದು ಹೇಳಿದರು.



ತಾಲ್ಲೂಕಿನಲ್ಲಿ 2-3 ವೃತ್ತಗಳ ಜವಾಬ್ದಾರಿಯನ್ನು ಒಬ್ಬರೇ ಗ್ರಾಮಲೆಕ್ಕಾಧಿಕಾರಿ ನಿರ್ವಹಿಸುತ್ತಿದ್ದಾರೆ. ಹಾಗಾಗಿ ಇಲಾಖೆಯಲ್ಲಿ ಗುಣಾತ್ಮಕ ಸೇವೆ ದೊರೆಯುಂತೆ ಮಾಡಬೇಕಾದರೆ ಅಗತ್ಯ ಪ್ರಮಾಣದಲ್ಲಿ ಗ್ರಾಮ ಲೆಕ್ಕಾಧಿಕಾರಿ ಹುದ್ದೆಯನ್ನು ಭರ್ತಿ ಮಾಡಲು ರಾಜ್ಯಸರ್ಕಾರ ಮುಂದಾಗಬೇಕು ಎಂದರು.

ಗ್ರೇಡ್-2 ತಹಶೀಲ್ದಾರ್ ನಾಗರಾಜು, ಉಪತಹಶೀಲ್ದಾರ್ ಎಸ್.ಎಸ್. ಪೂರ್ಣಿಮಾ, ಭೂದಾಖಲೆಗಳ ಸಹಾಯಕ ನಿರ್ದೇಶಕ ಲಲ್ಲೂ ಪ್ರಸಾದ್, ದಂಡಿಗನಹಳ್ಳಿ ಹೋಬಳಿ ಉಪತಹಶೀಲ್ದಾರ್ ಪ್ರಭಾಕರ್, ಶಿರಸ್ತೇದಾರ್ ಬಿ.ಎಸ್. ಪವನ್, ಗ್ರಾಮಲೆಕ್ಕಾಧಿಕಾರಿಗಳ ಸಂಘದ ಅಧ್ಯಕ್ಷ ನವೀನ್ ಕುಮಾರ್, ತಾಲ್ಲೂಕು ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಎಂ.ಆರ್. ಮಂಜುನಾಥ್ ಭಾಗವಹಿಸಿದ್ದರು.

# ಬಡ ಮಕ್ಕಳ ವ್ಯಾಸಂಗಕ್ಕೆ ನೆರವಿನ ಅಗತ್ಯವಿದೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಬಡ ಹಾಗೂ ಮಾಧ್ಯಮ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಹಕಾರದ ಅಗತ್ಯವಿದೆ ಎಂದು ಮಾರುತಿ ಎಂಟರ್‌ಪ್ರೈಸಸ್ ವ್ಯವಸ್ಥಾಪಕ ಆರ್. ಹರ್ಷಿತ್ ಹೇಳಿದರು.

ಬಾಣಾವರ ಪೇಟೆ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠ ಶಾಲೆಯ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಹಾಗೂ ಪರಿಕರ ವಿತರಿಸಿ ಮಾತನಾಡಿ, ಸರ್ಕಾರಿ ಹಾಗೂ ಖಾಸಗಿ ಶಾಲೆ ಎಂಬ ತಾರತಮ್ಯ ಶಿಕ್ಷಣ ಕ್ಷೇತ್ರದಲ್ಲಿ ಸಲ್ಲದು. ಶಿಕ್ಷಣ ಮಗುವಿನ ಹಕ್ಕು ಇದರ ಜವಾಬ್ದಾರಿಯನ್ನು ಪೋಷಕರು ವಹಿಸಿಕೊಳ್ಳಬೇಕು ಎಂದರು.

ಶಾಲೆಯ ಮುಖ್ಯ ಶಿಕ್ಷಕಿ ಗಿರಿಜಮ್ಮ ಮಾತನಾಡಿ, ಮಧ್ಯಾಹ್ನದ ಬಿಸಿ ಊಟ ಸಮವಸ್ತ್ರ ಸೇರಿದಂತೆ ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಸರ್ಕಾರ ಹಲವು ಕಾರ್ಯಕ್ರಮಗಳನ್ನ ಹಾಕಿಕೊಂಡಿದೆ. ಜೊತೆಗೆ ಸ್ಥಳೀಯ ಜನಪರ ಸಂಘ ಸಂಸ್ಥೆಗಳು ಸಮಾಜ ಸೇವಕರು ಸಹ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಹಾಗೂ ಮಾರ್ಗದರ್ಶನ ನೀಡುವ ಮನಸ್ಥಿತಿ ಹೆಚ್ಚಾಗುತ್ತಿರುವುದು ಸಂತಸದ ವಿಷಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳಿಗೆ ನೋಟ್ ಬುಕ್ ಹಾಗೂ ಪರಿಕರ ವಿತರಿಸಲಾಯಿತು. ಶಾಲೆಯ ಶಿಕ್ಷಕಿ ಆರ್. ಯಶೋಧ, ಸಹಶಿಕ್ಷಕ ಸತೀಶ್, ಕೆ. ರಾಧಾಮಣಿ, ಸಮಾಜ ಸೇವಕ ನಿಖಿಲ್, ಶಾಲೆಯ ಅಭಿವೃದ್ಧಿ ಸಮಿತಿಯ ಅಧ್ಯಕ್ಷೆ ಬಿ.ಬಿ. ಹಾಜಿರ ಹಾಗೂ ಇತರರಿದ್ದರು.

# ಕುಸುಮ್ ಯೋಜನೆ ರೈತರಿಗೆ ವರದಾನ: ಬಾಲಕೃಷ್ಣ

## ಯೋಜನೆಗೆ ಭೂಮಿ ನೀಡುವ ರೈತರಿಗೆ ಎಕರೆಗೆ 25 ಸಾವಿರ ರೂ. ಸಹಾಯಧನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ವತಿಯಿಂದ ತಾಲ್ಲೂಕಿನಲ್ಲಿ ಕುಸುಮ್-ಸಿ ಸೋಲಾರ್ ಯೋಜನೆ ಮೂಲಕ 40 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆಯ ಗುರಿ ಹೊಂದಲಾಗಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.



ತಾಲ್ಲೂಕಿನ ನುಗ್ಗೇಹಳ್ಳಿ ಗ್ರಾಮದಲ್ಲಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಯಮಿತ ಉಪ ವಿಭಾಗ ಕಚೇರಿ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ 24★7 ಸೇವಾ ಕೇಂದ್ರದ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದರು.

ತಾಲ್ಲೂಕಿನಲ್ಲಿ ಆಯ್ದ ಕೆಲವು ಭಾಗಗಳಲ್ಲಿ ಕುಸುಮ್-ಸಿ ಸೋಲಾರ್ ಯೋಜನೆ ಮೂಲಕ 40 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲು ಚಾಮುಂಡೇಶ್ವರಿ ವಿದ್ಯುತ್ ನಿಗಮದ ಅಧಿಕಾರಿಗಳು ಹೆಚ್ಚು ಕಾಳಜಿ ವಹಿಸಿದ್ದು ಈಗಾಗಲೇ ನುಗ್ಗೇಹಳ್ಳಿ ಹೋಬಳಿಯ ಗಂಜಿಗೆರೆ ಬಳಿ 16 ಎಕರೆ ಸರ್ಕಾರಿ ಜಾಗವನ್ನು ಭೂಸ್ವಾಧೀನ ಮಾಡಲಾಗಿದೆ. ಬಾಗೂರು ಹೋಬಳಿಯ ಕಾಮನಾಯಕನಹಳ್ಳಿ ಗ್ರಾಮದ ಬಳಿ 6 ಎಕರೆ ಸರ್ಕಾರ ಜಾಗವನ್ನು ಗುರುತು ಮಾಡಲಾಗಿದೆ ಎಂದರು.

ಜೊತೆಗೆ ಮಟ್ಟನವಿಲೆ ಸುತ್ತಲು 12 ಎಕರೆ ಜಾಗವನ್ನು ಗುರುತು ಮಾಡಲಾಗಿದ್ದು ರೈತರಿಗೆ ಪ್ರತಿ ವರ್ಷ ಈ ಯೋಜನೆ ಮೂಲಕ 1 ಎಕರೆಗೆ 25 ಸಾವಿರ ರೂ. ನೀಡಲಾಗುತ್ತದೆ.

ರೈತರು ಈ ಯೋಜನೆಗೆ ಭೂಮಿ ನೀಡುವುದರಿಂದ ಹೆಚ್ಚಿನ ಹಣ ಪಡೆಯಬಹುದಾಗಿದೆ. ಸೋಲಾರ್ ಫೆನಲ್ ಗಳನ್ನು ಅಳವಡಿಸಿ ವಿದ್ಯುತ್ ಉತ್ಪಾದನೆ ಮಾಡಲಾಗುತ್ತದೆ. ಉತ್ಪಾದನೆಯಾದ ವಿದ್ಯುತ್ ಅನ್ನು ತಾಲ್ಲೂಕಿಗೆ ಬಳಸಿಕೊಳ್ಳಬಹುದು ಎಂದು ತಿಳಿಸಿದರು. ನುಗ್ಗೇಹಳ್ಳಿ ಹೋಬಳಿ ಕೇಂದ್ರದ ಉಪ ವಿಭಾಗ ಕಚೇರಿಗೆ ಹೊಸ ಕಟ್ಟಡ ನಿರ್ಮಾಣಕ್ಕೆ ಇಲಾಖೆ ವತಿಯಿಂದ 2.10 ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. ಸದ್ಯದಲ್ಲೇ ಕಾಮಗಾರಿ ಪ್ರಾರಂಭಗೊಳ್ಳಲಿದೆ. ತೆಂಕನಹಳ್ಳಿ ಗೇಟ್ ಬಳಿ 220 ಕೆ.ವಿ. ರಿಸೀವ್ ಸ್ಟೇಷನ್ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ದೊರೆತಿದೆ. ಸದ್ಯದಲ್ಲೇ ಯೋಜನೆಗೆ ಟೆಂಡರ್ ಪ್ರಕ್ರಿಯೆ ನಡೆಯಲಿದೆ. ಉಪ ವಿಭಾಗ ಕಚೇರಿ ವ್ಯಾಪ್ತಿಗೆ ಬರುವ ಹಿರೀಸಾವೆ ಗ್ರಾಮವನ್ನು ಮಾಡೆಲ್ ವಿಲೇಜ್ ಯೋಜನೆಗೆ ಆಯ್ಕೆ ಮಾಡಿಕೊಳ್ಳಲಾಗಿದೆ. ಅದರಿಂದ ಗ್ರಾಮದಲ್ಲಿ ಸೋಲಾರ್ ವಿಲೇಜ್ ಮಾಡಲ್ ಯೋಜನೆ ಮೂಲಕ ಮುಂಬರುವ ದಿನಗಳಲ್ಲಿ ಗ್ರಾಹಕರಿಗೆ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದರು. ನುಗ್ಗೇಹಳ್ಳಿ ಹೋಬಳಿ ಕೇಂದ್ರದಲ್ಲಿ 24★7 ಯೋಜನೆ ಮೂಲಕ ಭಾಗದ ಜನರಿಗೆ ವಿದ್ಯುತ್ ಇಲಾಖೆಯಿಂದ ಗುಣಮಟ್ಟದ ಸೇವೆ ದಿನದ 24 ಗಂಟೆಯೂ ಸಿಗಲಿದೆ. ಚನ್ನರಾಯಪಟ್ಟಣದ ನಂತರ ಈ ಯೋಜನೆಯನ್ನು ನುಗ್ಗೇಹಳ್ಳಿ ವರೆಗೆ ವಿಸ್ತರಣೆ ಮಾಡಲಾಗಿದೆ. ಮುಂಬರುವ ದಿನಗಳಲ್ಲಿ ಶ್ರವಣಬೆಳಗೊಳ ಹಾಗೂ ಹಿರೀಸಾವೆ ಹೋಬಳಿ ಕೇಂದ್ರಗಳಿಗೂ ವಿಸ್ತರಿಸುವಂತೆ ಮನವಿ ಮಾಡುವುದಾಗಿದೆ ಎಂದರು.


ಅಕ್ರಮ-ಸಕ್ರಮ ಯೋಜನೆ ಮೂಲಕ ತಾಲ್ಲೂಕಿನಲ್ಲಿ ಬಾಕಿ ಉಳಿದಿರುವ ರೈತರಿಗೆ ಬೇಗ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಕಳೆದ ಅಧಿವೇಶನದಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರಿಗೆ ಮನವಿ ಮಾಡಲಾಗಿತ್ತು. ಅವರು ತಮ್ಮ ಮನವಿಗೆ ಸ್ಪಂದಿಸಿ ಡಿಸೆಂಬರ್ ಅಂತ್ಯದೊಳಗೆ ಸಮಸ್ಯೆ ಬಗೆಹರಿಸುವುದಾಗಿ ತಿಳಿಸಿದ್ದಾರೆ ಎಂದರು.

ಚಾಮುಂಡೇಶ್ವರಿ ವಿದ್ಯುತ್ ನಿಗಮದ ಕಾರ್ಯಪಾಲಕ ಎಂಜಿನೀಯರ್ ರತ್ನ, ವಲಯ ಅಭಿಯಂತರ ಹರೀಶ್, ನುಗ್ಗೇಹಳ್ಳಿ ಉಪ ವಿಭಾಗದ ಹೆಚ್.ಡಿ. ವಜ್ರಕುಮಾರ್, ಎಇ ಮಹದೇವ್, ಅಕ್ಕನಹಳ್ಳಿಕೂಡು ಗ್ರಾಮ ಪಂಚಾಯಿತಿ ಅಧ್ಯಕ್ಷರವಿ ಕುಮಾರ್, ಎಪಿಎಂಸಿ ಮಾಜಿ ಅಧ್ಯಕ್ಷ ದೊರೆಸ್ವಾಮಿ, ನಾಗರಕ ವೇದಿಕೆ ಅಧ್ಯಕ್ಷ ತೋಟಿ ನಾಗರಾಜ್, ಕೃಷಿ ಪತ್ತಿನ ಅಧ್ಯಕ್ಷ ವಿಕ್ಟರ್, ಕೃಷಿ ಪತ್ತಿನ ಉಪಾಧ್ಯಕ್ಷ ಚಂದ್ರಣ್ಣ, ನಿರ್ದೇಶಕರಾದ ಹುಲಿಕೆರೆ ಸಂಪತ್ ಕುಮಾರ್, ಪಟೇಲ್ ಕುಮಾರ್ ಇತರರಿದ್ದರು.

# ಚೀಕನಹಳ್ಳಿ ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್ ಬುಕ್ ವಿತರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಬೆಂಗಳೂರು ಮತ್ತು ಸಾಗರದ ದಿನೇಶ್ ಜೋಷಿ ಫೌಂಡೇಷನ್ ಸಂಯುಕ್ತಾಶ್ರಯದಲ್ಲಿ ಪ್ರತಿಭಾ ಪುರಸ್ಕಾರ ಮತ್ತು ನೋಟ್ ಬುಕ್ ವಿತರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆ ಮುಖ್ಯಸ್ಥ ದಿನೇಶ್ ಜೋಷಿ ಹೇಳಿದರು.



ತಾಲ್ಲೂಕಿನ ಚೀಕನಹಳ್ಳಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಬುಕ್ ವಿತರಣೆ ಮಾಡಿ ಮಾತನಾಡಿದ ಅವರು, ಪ್ರತಿವರ್ಷದಂತೆ ಈ ವರ್ಷವೂ ಕೂಡ ನಾವು ನಮ್ಮ ಫೌಂಡೇಷನ್ ವತಿಯಿಂದ ಹಿರಿಯ ಹಾಗೂ ಕಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಿಸುತ್ತಿದ್ದೇವೆ. ಕಳೆದ ಬಾರಿ ನೋಟ್ ಬುಕ್ ವಿತರಣೆಯಲ್ಲಿ ವಿಳಂಬವಾದ ಕಾರಣ ಈ ವರ್ಷ ಶಾಲೆ ಶುರುವಾದ ಮೊದಲ ವಾರದಲ್ಲಿ ವಿದ್ಯಾರ್ಥಿಗಳಿಗೆ ಪ್ರಾರಂಭ ಹಂತದಲ್ಲಿ ಅನುಕೂಲವಾಗಲೆಂದು ನೋಟ್ ಬುಕ್ ವಿತರಿಸಿದ್ದೇವೆ. ನೋಟ್ ಬುಕ್ ನೀಡುವುದು ದೊಡ್ಡ ಸಾಧನೆಯಲ್ಲ. ಅದನ್ನು ವಿದ್ಯಾರ್ಥಿಗಳು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಂಡು ಸಮಾಜದಲ್ಲಿ ಉತ್ತಮ ವ್ಯಾಸಂಗ ಮಾಡಿ ಮುಂದೆ ಬಂದು ಮಾದರಿಯಾಗಬೇಕು. ನಾವು ವ್ಯಾಸಂಗ ಮಾಡುವ ವೇಳೆ ಕಡುಬಡವರಾಗಿದ್ದು ನೋಟ್ ಬುಕ್ ಖರೀದಿಸಲು ಹಣವಿಲ್ಲದೆ ಹರಸಾಹಸ ಪಡಬೇಕಾಗಿತ್ತು. ಆದರೆ ಈಗ ಸರ್ಕಾರ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಮವಸ್ತ್ರ ಪಠ್ಯ ಪುಸ್ತಕ ನೀಡುತ್ತಿದೆ. ಆದರೆ ನೋಟ್‌ಬುಕ್‌ಗಳನ್ನು ವಿತರಿಸುತ್ತಿಲ್ಲ. ಇದರಿಂದ ಕೂಲಿ ಮಾಡುವ ವಿದ್ಯಾರ್ಥಿಗಳ ಪೋಷಕರಿಗೆ ಸಾಕಷ್ಟು ತೊಂದರೆಯಾಗುತ್ತಿರುವುದು ಕಂಡುಬಂದಿದೆ. ಹಾಗಾಗಿ ನಮ್ಮ ಫೌಂಡೇಷನ್ ವತಿಯಿಂದ ಕಡುಬಡವರ ವಿದ್ಯಾರ್ಥಿಗಳನ್ನು ಗುರ್ತಿಸಿ ಅವರಿಗೆ ನೋಟ್ ಬುಕ್ ವಿತರಿಸುತ್ತಿದ್ದೇವೆ ಎಂದರಲ್ಲದೆ ಒಬ್ಬ ವಿದ್ಯಾರ್ಥಿ ಉತ್ತಮವಾಗಿ ರೂಪುಗೊಳ್ಳಲು ಶಿಕ್ಷಕರ ಹಾಗೂ ಪೋಷಕರ ಪ್ರೋತ್ಸಾಹ ಅತ್ಯಗತ್ಯ. ವಿದ್ಯಾರ್ಥಿಗಳು ಪಾಠದ ಜೊತೆಗೆ ಜೀವನದ ಕಲಿಕೆಯನ್ನು ಸಂಸ್ಕೃತಿ ಸಂಸ್ಕಾರಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಟ್ರಸ್ಟ್‌ನ ಕೃಷ್ಣಮೂರ್ತಿ ಮಾತನಾಡಿ, ವಿದ್ಯಾರ್ಥಿ ದೆಸೆಯಲ್ಲಿ ಓದುವವರಿಗೆ ಕೆಲವೊಮ್ಮೆ ಹಣಕಾಸಿನ ತೊಂದರೆಯಾಗುವುದು ಸಹಜ. ಓದುವ ಹಂಬಲ ಇದ್ದರೂ ಇತರ ನೋಟ್ ಬುಕ್ ಹಾಗೂ ಪರಿಕರ ತಗೆದುಕೊಳ್ಳಲು ಕಷ್ಟವಾಗುತ್ತದೆ. ಅಂತಹ ಸಂದರ್ಭದಲ್ಲಿ ದಾನಿಗಳು ಸಂಘ ಸಂಸ್ಥೆಗಳು ಮುಂದೆ ಬಂದಾಗ ಸಮಾಜ ಸೇವೆ ಮಾಡಲು ಇನ್ನಷ್ಟು ಉತ್ಸಾಹ ಬರುತ್ತದೆ ಎಂದರು.

ಮುಖ್ಯ ಶಿಕ್ಷಕ ಮಂಜುನಾಥ್ ಮಾತನಾಡಿ, ಸರ್ಕಾರಿ ಶಾಲೆಯಲ್ಲಿ ಎಲ್ಲಾ ಸೌಲಭ್ಯಗಳಿದ್ದು ಪೋಷಕರು ತಮ್ಮ ಮಕ್ಕಳನ್ನು ಸೇರಿಸಬೇಕು. ವಿವಿಧ ಸಂಘ ಸಂಸ್ಥೆಗಳು ಸರ್ಕಾರಿ ಶಾಲೆಗಳಿಗೆ ನೆರವು ನೀಡುತ್ತಿವೆ ಎಂದು ತಿಳಿಸಿದರು. ನಂದಿನಿ, ನರಹರಿ ರಾವ್, ಲೀಲಾಮೂರ್ತಿ, ಶೈಲಜಾ, ದೀಪಕ್ ಇತರರಿದ್ದರು.

# ಸೇವೆ ಸರಳೀಕರಣಕ್ಕೆ ಲ್ಯಾಪ್‌ಟಾಪ್ ವಿತರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಕಂದಾಯ ಇಲಾಖೆಯನ್ನು ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸುವ ಉದ್ದೇಶದಿಂದ ಗ್ರಾಮ ಲೆಕ್ಕಾಧಿಕಾರಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ಸರ್ಕಾರ ವಿತರಿಸುತ್ತಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.



ತಾಲ್ಲೂಕು ಕಚೇರಿಯಲ್ಲಿ ಮಂಗಳವಾರ ಗ್ರಾಮ ಲೆಕ್ಕಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಿಸಿ ಮಾತನಾಡಿದ ಅವರು, ಕಂದಾಯ ಇಲಾಖೆಯ ಆಸ್ತಿ ಮತ್ತು ಭೂ ದಾಖಲೆಗಳ ನಿರ್ವಹಣೆಗೆ ಸಂಬಂಧಿಸಿ ಸಾರ್ವಜನಿಕ ಸೇವೆಗಳನ್ನು ಪಾರದರ್ಶಕವಾಗಿ ವಿತರಿಸಲು ಇದರಿಂದ ಅನುಕೂಲವಾಗುತ್ತದೆ. ಎಲ್ಲಾ ಕಡತಗಳ ವಿಲೇವಾರಿಯು ಆನ್‌ಲೈನ್ ಮೂಲಕವೇ ಆಗಬೇಕು. ಕೆಲಸದಲ್ಲಿ ವಿಳಂಬವಾಗಬಾರದು ಮತ್ತು ದಾಖಲೆಗಳು ಕಳೆದು ಹೋಗದಂತೆ ನೋಡಿಕೊಳ್ಳುವ ಉದ್ದೇಶದಿಂದ ಡಿಜಿಟಲೀಕರಣಗೊಳಿಸಲಾಗುತ್ತಿದೆ. ರೈತರಿಗೆ ಉತ್ತಮ ಸೇವೆ ನೀಡುವುದು ಮುಖ್ಯ ಉದ್ದೇಶ ಎಂದು ತಿಳಿಸಿದರು.

ಡಿಜಿಟಲೀಕರಣದಿಂದ ದಾಖಲೆಗಳ ಅಗತ್ಯವಿದ್ದಾಗ ಸುಲಭವಾಗಿ ಪಡೆಯಬಹುದು.

ರೈತರು ವಿನಾಕಾರಣ ಕಚೇರಿಗಳಿಗೆ ಅಲೆಯುವುದು ತಪ್ಪುತ್ತದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಕಂಪ್ಯೂಟರ್ ಮತ್ತು ಸ್ಕ್ಯಾನರ್‌ಗಳನ್ನು ಒದಗಿಸುವ ಜೊತೆಗೆ ನುರಿತ ಸಿಬ್ಬಂದಿ ನೇಮಿಸಲಾಗಿದೆ ಎಂದು ಹೇಳಿದರು.

ತಾಲ್ಲೂಕಿನಲ್ಲಿ 2-3 ವೃತ್ತಗಳ ಜವಾಬ್ದಾರಿಯನ್ನು ಒಬ್ಬರೇ ಗ್ರಾಮ ಲೆಕ್ಕಾಧಿಕಾರಿ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ಇಲಾಖೆಯಲ್ಲಿ ಗುಣಾತ್ಮಕ ಸೇವೆ ಒದಗಿಸಲು ಅಗತ್ಯ ಪ್ರಮಾಣದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ರಾಜ್ಯ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ಲ್ಯಾಪ್‌ಟಾಪ್ ಪಡೆದ ಎಲ್ಲಾ ಕಂದಾಯ ಇಲಾಖೆ ಅಧಿಕಾರಿಗಳು ರಾಜ್ಯ ಕಂದಾಯ ಇಲಾಖೆಗೆ ಜಿಲ್ಲೆಯ ಸಮಗ್ರ ಮಾಹಿತಿಯನ್ನು ಒದಗಿಸುವ ಜೊತೆಗೆ ಸಾರ್ವಜನಿಕರಿಗೆ ಸರಳ ಮತ್ತು ಉತ್ತಮ ರೀತಿಯಲ್ಲಿ ಸೇವೆ ಸಲ್ಲಿಸುವಂತೆ ಸೂಚಿಸಿದರು.

ಉಪವಿಭಾಗಾಧಿಕಾರಿ ಎಂ.ಕೆ. ಶ್ರುತಿ, ತಹಸೀಲ್ದಾರ್ ಅರವಿಂದ್, ಗ್ರೇಡ್-2 ತಹಸೀಲ್ದಾರ್ ಮೋಹನ್, ಚುನಾವಣಾ ಶಿರಸ್ತೇದಾರ್ ಶ್ವೇತಾ ಹಾಗೂ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಜೂನ್ -11

**1770:** ಜೇಮ್ಸ್ ಬ್ರೂಸ್ ಎಥಿಯೋಪಿಯಾದ ಮೂಲದ ನೈಲ್ ನದಿಯ ಮೂಲವನ್ನು ಕಂಡುಹಿಡಿದರು. ಈ ಸಂಬಂಧಿತ ಕವನ ಮತ್ತು ಪ್ರವಾಸ ಕಥನಗಳು ಇಂಗ್ಲಿಷ್ ಹಾಗೂ ಭಾರತೀಯ ಪ್ರವಾಸೋದ್ಯಮದಲ್ಲಿಯೂ ಪ್ರಭಾವ ಬೀರಿದವು.

**1857:** ಭಾರತೀಯ ಸ್ವಾತಂತ್ರ್ಯ ಸಮರದ (ಪ್ರಥಮ ಸ್ವಾತಂತ್ರ್ಯ ಹೋರಾಟ) ಸಂದರ್ಭದಲ್ಲಿ ಕನ್ಪುರದಲ್ಲಿ ಬ್ರಿಟಿಷ್ ವಿರೋಧಿ ಹೋರಾಟ ತೀವ್ರಗೊಂಡಿತು.

**1977:** ಎಮರ್ಜೆನ್ಸಿ ನಂತರದ ಚುನಾವಣೆಯಲ್ಲಿ ಜಯಶೀಲರಾಗಿದ್ದ ಮುರಾರ್ಜಿ ದೇಸಾಯಿ ನೇತೃತ್ವದ ಜನತಾ ಪಕ್ಷದ ಸರ್ಕಾರವು ಹಲವು ಆಪತ್ಕಾಲದ ನಿಯಮಗಳನ್ನು ರದ್ದುಗೊಳಿಸಿತು.

### ಜನನ

**1897:** ರಾಮ ಪ್ರಸಾದ್ ಬಿಸ್ಮಿಲ್. ಖ್ಯಾತ ಕ್ರಾಂತಿಕಾರಿ, ಹೂಸ್ತಾನ್ ರಿಪಬ್ಲಿಕನ್ ಅಸೋಸಿಯೇಷನ್ ಸದಸ್ಯ. ಕಾಕೋರಿ ಕೇಸ್‌ನಲ್ಲಿ ಭಾಗವಹಿಸಿದ್ದರು.

**1943:** ಕಮಲಾ ದಾಸ್. ಕವಯತ್ರಿ, ಲೇಖಕಿ, ಅವರ ಕೃತಿಗಳು ಮಹಿಳಾ ವಿಚಾರಗಳಲ್ಲಿ ಕ್ರಾಂತಿಕಾರಕವಾಗಿ ಪರಿಗಣಿಸಲ್ಪಟ್ಟಿವೆ.

### ಮರಣ

**2001:** ಮುಹಮ್ಮದ್ ಫಖ್ರುದ್ದೀನ್ ಅಲಿ ಅಹ್ಮದ್. ಭಾರತದ ಐದನೇ ರಾಷ್ಟ್ರಪತಿ. ಅವರ ಅಧ್ಯಕ್ಷತೆಯಲ್ಲಿ ಪಠ್ಯಕ್ರಮ, ಅಭಿವೃದ್ಧಿ ಯೋಜನೆಗಳಲ್ಲಿ ಹಲವಾರು ಬದಲಾವಣೆಗಳು ನಡೆದವು.

# ಸಕಲೇಶಪುರ ಪಟ್ಟಣ ಅಭಿವೃದ್ಧಿಗೆ ಶಕ್ತಿಮೀರಿ ಶ್ರಮ: ಸಿಮೆಂಟ್ ಮಂಜು



ಸಕಲೇಶಪುರ: ಪಟ್ಟಣದ ಸಮಗ್ರ ಅಭಿವೃದ್ಧಿಗೆ ಶಕ್ತಿ ಮೀರಿ ಕೆಲಸ ಮಾಡಲಾಗುತ್ತಿದೆ ಎಂದು ಶಾಸಕ ಸೀಮೆಂಟ್ ಮಂಜು ಹೇಳಿದರು.

ಪಟ್ಟಣದ ಚಂಪಕ ನಗರ ಬಡಾವಣೆಯ ನಿರ್ಮಾಣಗೊಂಡಿರುವ ಕಾಂಕ್ರೀಟ್ ರಸ್ತೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿ, ಪಟ್ಟಣದಲ್ಲಿ ಹಳೇ ಬಡಾವಣೆ ಎಂದು ಗುರುತಿಸಿಕೊಂಡಿದ್ದ ಚಂಪಕನಗರ ಬಡಾವಣೆ ಕೆಲವು ರಸ್ತೆಗಳು ಕಾಂಕ್ರಿಟಿಕರಣಗೊಳ್ಳದ ಕಾರಣ ಹಿಂದುಳಿದ ಬಡಾವಣೆ ಎಂಬ ಹಣೆಪಟ್ಟಿ ಅಂಟಿಸಿಕೊಂಡಿತ್ತು. ಪುರಸಭೆಗೆ ಅತಿಹೆಚ್ಚು ಆದಾಯ ತಂದುಕೊಡುವ ಈ ಬಡಾವಣೆಯ ಬಾಕಿ ರಸ್ತೆ ಕಾಮಗಾರಿಯನ್ನು 1 ಕೋಟಿ ರೂ. ವೆಚ್ಚದಲ್ಲಿ ಪರಿವರ್ತಿಸುವ ಮೂಲಕ ಹಿಂದುಳಿದ ಬಡಾವಣೆ ಎಂಬ ಪಟ್ಟಿಯನ್ನು ಕಿತ್ತುಹಾಕುವ ಪ್ರಯತ್ನ ನಡೆಸಲಾಗಿದೆ. ಬಾಕಿ ಉಳಿದಿರುವ ಚರಂಡಿಗಳಿಗೆ ಸ್ಲಬ್ ಹಾಕುವ ಕಾರ್ಯವನ್ನು ಕಾಲಾನುಕಾಲಕ್ಕೆ ನಡೆಸಲಾಗುವುದು ಎಂದರು.

ಸ್ವಚ್ಛತೆ ಕಾರ್ಯ ನಡೆಸುವುದು ಪುರಸಭೆಗೆ ಮಾತ್ರ ಸಂಬಂಧಿಸಿದ ಕೆಲಸವಲ್ಲ. ಇದು ಪ್ರತಿಯೊಬ್ಬ ನಾಗರಿಕರ ಕೆಲಸ. ಹಸಿ ಹಾಗೂ ಒಣ ಕಸ ವಿಂಗಡಿಸಿ ಕಸವನ್ನು ಸಾರ್ವಜನಿಕ ಪ್ರದೇಶದಲ್ಲಿ ಹಾಕಬೇಡಿ ಎಂಬ ಪುರಸಭೆಯ ಮನವಿಗೆ ನಾಗರಿಕರು ಸ್ಪಂದಿಸದಿರುವುದು ಪಟ್ಟಣದ ಸ್ವಚ್ಛತೆಗೆ ಸಮಸ್ಯೆಯಾಗಿದೆ ಎಂದರು.

# ರೋಚಕ ಸ್ಟೋಲನ್

## - ಪ್ರಶಾಂತ್ ಭಟ್

**ಮನದ ಹಾದಿ**




**Stolen (Hindi, 2023, amazon prime videos)**

ಈ ಸಿನಿಮಾ ಶುರುವಾದ ಕ್ಷಣದಿಂದ ನೋಡುಗನ ಸೀಟಿನ ತುದಿಯಲ್ಲಿ ಕೂರಿಸುತ್ತದೆ. ಒಂದು ಮಗು ಕಿಡ್ನಾಪ್ ಆಗುತ್ತದೆ. ಅದನ್ನು ಹುಡುಕುವ ಡ್ರಾಮಾದಲ್ಲಿ ಅಣ್ಣ ತಮ್ಮಂದಿರು ಅರಿವಿದ್ದೋ ಇಲ್ಲದೆಯೋ ಸಿಲುಕುತ್ತಾರೆ.

ಇದರ ನಡುವೆ ಆ ಮಗುವಿನ ತಾಯಿ ಎನ್ನುವವಳು ಸುಳ್ಳು ಹೇಳುತ್ತಿದ್ದಾಳಾ? ಆ ಮಗು ಅವಳದೆಯಾ? ಅವಳದೇ ಆದರೆ ಅವಳು ಅಷ್ಟು ಹೆದರಿರುವುದು ಯಾಕೆ? ತನಗೆ ಸಂಬಂಧವೇ ಇಲ್ಲದ ವಿಷಯದಲ್ಲಿ ಸಹಾಯ ಮಾಡಲು ತಮ್ಮ ಯಾಕೆ ಹೋದ?

ಅಣ್ಣನಿಗೆ ಹಿಂಜರಿಕೆ ಯಾಕೆ? ಇದೆಲ್ಲ ಪ್ರಶ್ನೆಗಳ ಎತ್ತುತ್ತಲೇ ಸಿನಿಮಾ ನಾಗಾಲೋಟದಲ್ಲಿ ಓಡುತ್ತದೆ.

ಸಿನಿಮಾದ ಅವಧಿಯೂ ಚಿಕ್ಕದಾದ ಕಾರಣ ಎಲ್ಲೂ ಬೋರ್ ಕೂಡ ಆಗುವುದಿಲ್ಲ.

ಸಿನಿಮಾ ಹಲವಾರು ಕಟು ಸತ್ಯಗಳ ಅನಾವರಣ ಮಾಡುವ ಕಾರಣ ಇಷ್ಟವಾಗಿ ಭಯ ಹುಟ್ಟಿಸುತ್ತದೆ.

ಇತ್ತೀಚೆಗೆ ಓದಿದ **chronicle of an hour and a half** ಕಾದಂಬರಿಯ ಮಾಬ್ ಮೆಂಟಾಲಿಟಿಯ ಇದು ಸಮರ್ಥವಾಗಿ ತೋರಿಸಿದೆ.

ರೇಟಿಂಗ್ 9/10

# ಸಾಲ ತೀರಿಸಲಾಗದೆ ರೈತ ಆತ್ಮಹತ್ಯೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ತಾಲ್ಲೂಕಿನ ಕೆ.ಗೋಪನಹಳ್ಳಿ ಗ್ರಾಮದಲ್ಲಿ ಸಾಲಬಾಧೆ ತಾಳಲಾರದೆ ರೈತ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಗ್ರಾಮದ ಚಂದ್ರೇಗೌಡ (40) ಮೃತರು. ಸೋಮವಾರ ರಾತ್ರಿ ಕ್ರಿಮಿನಾಶಕ ಸೇವಿಸಿ ಸಾವು ಬದುಕಿನ ನಡುವೆ ಹೊರಳಾಡುತ್ತಿದ್ದ ರೈತನನ್ನು ಗ್ರಾಮಸ್ಥರು ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದರು. ಚಿಕಿತ್ಸೆಗಾಗಿ ಹಿಮ್ಸ್‌ಗೆ ಕರೆತರಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ಮೃತರಿಗೆ ಪತ್ನಿ, ಇಬ್ಬರು ಹೆಣ್ಣು ಮಕ್ಕಳಿದ್ದಾರೆ. 2 ಎಕರೆ ಭೂಮಿಯಲ್ಲಿ ವ್ಯವಸಾಯ ಮಾಡಿಕೊಂಡಿದ್ದ ಚಂದ್ರೇಗೌಡ ಕೃಷಿಗಾಗಿ ಕೆರಗೋಡು ಗ್ರಾಮದ ಸಹಕಾರಿ ಸಂಘದಲ್ಲಿ 1 ಲಕ್ಷ ರೂ. ಸಾಲ ಮಾಡಿದ್ದರು. ಸಂಬಂಧಿಕರು ಮತ್ತು ಗ್ರಾಮಸ್ಥರ ಬಳಿ 4 ಲಕ್ಷ ರೂ. ಕೈ ಸಾಲ ಪಡೆದಿದ್ದರು. ಹಳ್ಳಿಮೈಸೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248